ಗ್ರಾಮೀಣ ಕೃಪಾಂಕ ನೀಡಿಕೆ ಬಗ್ಗೆ

1428 (1700) ಶ್ರೀ ಮೋಹನ್ ಕೆ. ಶೆಟ್ಟಿ (ಕುಮಟ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಸರ್ಕಾರವು ಗ್ರಾಮೀಣ ಕೃಪಾಂಕದ ಬಗ್ಗೆ ತೆಗೆದುಕೊಂಡ ನಿರ್ಧಾರಗಳೇನು?

ಆ) ಸರ್ಕಾರದ ನಿರ್ಧಾರಗಳು ವಿಳಂಬವಾದಲ್ಲಿ ನೇಮಕಾತಿಇಲ್ಲದೆ ಸಾರ್ವಜನಿಕರಿಗೆ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಳ್ಳಲಿರುವ ಕ್ರಮಗಳೇನು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯ ಮಂತ್ರಿಗಳು) :

ಅ) ಗ್ರಾಮೀಣ ಅಭ್ಯರ್ಥಿಗಳಿಗೆ ಕೃಪಾಂಕ ನೀಡುವ ಬಗ್ಗೆ ರಾಜ್ಯ ಉಚ್ಚ ನ್ಯಾಯಾಲಯ ಹಾಗೂ ಸರ್ವೋಚ್ಚ ನ್ಯಾಯಾಲಯ ನೀಡಿದ ತೀರ್ಪಿನ ಹಿನ್ನೆಲೆಯಲ್ಲಿ, ಈ ವಿಷಯ ಕುರಿತು ಅಧ್ಯಯನ ಮಾಡಿ, ಸರ್ಕಾರಕ್ಕೆ ವರದಿ ಸಲ್ಲಿಸಲು ರಾಜ್ಯ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರ ಅಧ್ಯಕ್ಷತೆಯಲ್ಲಿ ಮೂವರು ಸದಸ್ಯರ ಉನ್ನತ ಮಟ್ಟದ ಆಯೋಗವನ್ನು ರಚಿಸಲಾಗಿದೆ. ಆಯೋಗ ನೀಡುವ ವರದಿಯನ್ನು ಸ್ವೀಕರಿಸಿದ ನಂತರ ನಿರ್ಣಯ ಕೈಗೊಳ್ಳಲಾಗುವುದು.

ಆ) ಮೂರು ತಿಂಗಳ ಒಳಗೆ ಸದರಿ ಆಯೋಗ ಸರ್ಕಾರಕ್ಕೆ ವರದಿಯನ್ನು ನೀಡತಕ್ಕದೆಂದು ವಿಧಿಸಲಾಗಿದೆ.

ಇ) ಸಾರ್ವಜನಿಕರಿಗೆ ಅಗತ್ಯ ಸೇವೆಗಳನ್ನು ಒದಗಿಸುವ ಇಲಾಖೆ ಸಂಸ್ಥೆಗಳಲ್ಲಿನ ಖಾಲಿ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಅನುಮತಿ ನೀಡುವ ವಿಚಾರ ಸರ್ಕಾರದ ಪರಿಶೀಲನೆಯಲ್ಲಿದೆ.

ಬೆಂಗಳೂರು ಮಹಾನಗರ ಪಾಲಿಕೆಯವರು ನಿರ್ಮಿಸುತ್ತಿರುವ ಮೇಲು ಸೇತುವೆಯ ಅಸಮರ್ಪಕ ನಿರ್ವಹಣೆ

1430 (1560) ಶ್ರೀ ಪಿ.ಸಿ. ಮೋಹನ್ (ಚಿಕ್ಕಪೇಟೆ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

1) ಬೆಂಗಳೂರು ಮಹಾನಗರ ಪಾಲಿಕೆಯವರು ನಿರ್ಮಿಸಿರುವ ಸಿರಸಿ ವೃತ್ತದಿಂದ ಸಿಟಿ ಮಾರುಕಟ್ಟೆವರೆಗಿನ ಮೇಲು ಸೇತುವೆಯು ಯಾವ ಯಾವ ಮಾರ್ಗಗಳಿಗೆ ಸಂಪರ್ಕವನ್ನು ಕಲ್ಪಿಸುತ್ತದೆ.

2) ಈ ಮೇಲು ಸೇತುವೆಯನ್ನು ಎಂದು ಸಾರ್ವಜನಿಕ ಸಂಚಾರಕ್ಕಾಗಿ ತೆರೆಯಲಾಯಿತು:

3) ಈ ಸೇತುವೆಯ ನಿರ್ವಹಣೆಯನ್ನು ಯಾರಿಗೆವಹಿಸಲಾಗಿದೆ ಹಾಗೂ ಈ ನಿರ್ವಹಣೆಗೆ ತಗಲುವ (ವೆಚ್ಚ) ಹಣವೆಷ್ಟು;

4) ಈ ಮೇಲು ಸೇತುವೆಯ ನಿರ್ವಹಣೆ ಸರಿಯಿಲ್ಲದೆ ಅಪಘಾತಗಳು ಸಂಭವಿಸುತ್ತಿರುವುದು ನಿಜವಲ್ಲವೇ: